ಕಲ್ಯಾಣ ಸಮಿತಿಯ 2009–10ನೇ ಸಾಲಿನ ಇಪ್ಪತ್ತನೇ ವರದಿಯನ್ನು ನಾನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು : ವರದಿಯನ್ನೊಪ್ಪಿಸಲಾಯಿತು.

ಶ್ರೀ ಎಂ.ಕೆ. ಪಟ್ಟಣಶೆಟ್ಟಿ (ಅಧ್ಯಕ್ಷರು, ಸಾರ್ವಜನಿಕ ಉದ್ಯಮಗಳ ಸಮಿತಿ): ಮಾನ್ಯ ಅಧ್ಯಕ್ಷರೆ, ಸಾರ್ವಜನಿಕ ಉದ್ಯಮಗಳ ಸಮಿತಿಯ 2009–10ನೇ ಸಾಲಿನ ನೂರ ಇಪ್ಪತ್ತನೇ ಹಾಗೂ ನೂರ ಇಪ್ಪತ್ತೊಂದನೇ ವರದಿಯನ್ನೊಪ್ಪಿಸುತ್ತಿದ್ದೇನೆ.

ಅಧ್ಯಕ್ಷರು : ವರದಿಯನ್ನೊಪ್ಪಿಸಲಾಯಿತು.

10. ಚುನಾವಣಾ ಪ್ರಸ್ತಾವ:

ಶ್ರೀ ಎಸ್. ಸುರೇಶ್‌ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ಅಧಿನಿಯಮ, 2009ರ ಪ್ರಕರಣ 20(ಐ) ರನ್ವಯ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸಿಂಡಿಕೇಟ್‌ಗೆ (ಪ್ರಶಾಸನ ಸಭೆ) ಒಬ್ಬ ಸದಸ್ಯರನ್ನು ಚುನಾಯಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವವನ್ನು ಮಂಡಿಲಾಯಿತು.

11. ಎತ್ತೀಯ ಕಾರ್ಯಕಲಾಪ:

2010–11ನೇ ಸಾಲಿನ ಪೂರಕ ಅಂದಾಜುಗಳ ಮಂಡನೆಗೆ ಅನುಮತಿ ಕೋರಿಕೆ

ಅಧ್ಯಕ್ಷರು: 2010–11ನೇ ಸಾಲಿನ ಪೂರಕ ಅಂದಾಜುಗಳು (ಎರಡನೇ ಕಂತು) ಮಂಡಿಸುವುದು.

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿ ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, 2010–11ನೇ ಸಾಲಿನ ಪೂರಕ ಅಂದಾಜುಗಳು (ಎರಡನೇ ಕಂತು) ಅನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ಈ ಕೆಳಗಿನ ಪ್ರಸ್ತಾವಗಳನ್ನು ಮಂಡಿಸುತ್ತಿದ್ದೇನೆ.